JUNE 28, 2025

**AKASHAVANI - DHARWAD**

**PRADESH SAMACHARA (KANNADA) 7.05 A.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಮುಖ್ಯಾಂಶಗಳು:**

**ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಭೆ; ಇಲಾಖೆ ದಕ್ಷತೆ ಹೆಚ್ಚಳಕ್ಕೆ ನಿರ್ದೇಶನ.**

**ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ; ಕೆಂಪೇಗೌಡರ ಕೊಡುಗೆಗಳನ್ನು ಸ್ಮರಿಸಿದ ಗಣ್ಯರು.**

**ರಾಜ್ಯದ ಎಲ್ಲ ಜಿಲ್ಲೆಗಳಲ್ಲೂ ವಿಜ್ಞಾನ ಕೇಂದ್ರ ಸ್ಥಾಪನೆಗೆ ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವಾಲಯ ಯೋಜನೆ.**

**20230 ರ ವೇಳೆಗೆ, 500 ಗಿಗಾ ವ್ಯಾಟ್ ಹಸಿರು ಇಂಧನ ಉತ್ಪಾದಿಸಲು ಕೇಂದ್ರದ ಸಿದ್ಧತೆ**

<><><>

**ಈಗ ವಾರ್ತೆಗಳ ವಿವರ**

<><><>

**ರಾಜ್ಯ ಪೊಲೀಸ್ ಇಲಾಖೆಗೆ ಸಾಕಷ್ಟು ಅನುದಾನವನ್ನು ಒದಗಿಸಲಾಗಿದ್ದು, ಬಹುತೇಕ ಬೇಡಿಕೆಗಳನ್ನು ಈಡೇರಿಸಲಾಗಿದೆ. ಖಾಲಿ ಇರುವ ಹುದ್ದೆಗಳ ಭರ್ತಿಗೆ, ಮುಂದಿನ 2 ತಿಂಗಳ ಒಳಗಾಗಿ, ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರು ಪೊಲೀಸ್ ಮಹಾನಿರ್ದೇಶಕರ ಕಚೇರಿಯಲ್ಲಿ ಜರುಗಿದ, ಪೊಲೀಸ್ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಸಮಾಜದ ನೆಮ್ಮದಿ ಕಾಪಾಡಲು ಪೊಲೀಸ್ ಕಾರ್ಯಕ್ಷಮತೆ ಬಹಳ ಮುಖ್ಯವಾಗಿದೆ. ಪ್ರಜಾರಾಜ್ಯದಲ್ಲಿ ಪೊಲೀಸ್ ಠಾಣೆಗಳು ಜನಸ್ನೇಹಿಯಾಗಬೇಕು ಹಾಗೂ ಅಪರಾಧ ಕೃತ್ಯ ಎಸಗುವ ಮನೋಸ್ಥಿತಿಯುಳ್ಳವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶಿಸಿದರು. ಸಭೆಯಲ್ಲಿ ಗೃಹ ಸಚಿವ ಜಿ.ಪರಮೇಶ್ವರ ಸಹಿತ ಅಧಿಕಾರಿಗಳು ಪಾಲ್ಗೊಂಡಿದ್ದರು.**

<><><>

**ಉತ್ತರ ಕನ್ನಡ ಜಿಲ್ಲೆಯಲ್ಲಿ, ಅಪೌಷ್ಟಿಕತೆಯಿಂದ ಬಳಲುತ್ತಿರುವ, 59 ಮಕ್ಕಳನ್ನು ಗುರುತಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸುಷ್ಮಾ ಗೋಡಬೋಲೆ ತಿಳಿಸಿದ್ದಾರೆ. ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ, ಜಿಲ್ಲಾಡಳಿತದ ಹಿರಿಯ**

ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಅಪೌಷ್ಟಿಕತೆ ಹಾಗೂ ರಕ್ತ ಹೀನತೆಯಿಂದ ಬಳಲುತ್ತಿರುವ 59 ಮಕ್ಕಳ ಚಿಕಿತ್ಸೆಗೆ ಹಾಗೂ ಸೂಕ್ತ ಆರೈಕೆಗೆ ಜಿಲ್ಲೆಯ ಎಲ್ಲ ತಾಲೂಕು ಆಸ್ಪತ್ರೆಗಳಲ್ಲಿ ಪ್ರತ್ಯೇಕ ಹಾಸಿಗೆ ಮೀಸಲಿಟ್ಟು, ಜಿಲ್ಲಾ ಆರೋಗ್ಯಾಧಿಕಾರಿ ಮೇಲುಸ್ತುವಾರಿ ವಹಿಸುವಂತೆ ನಿರ್ದೇಶಿಸಿದ್ದಾರೆ.

<><><>

ಹಸಿವು ಮುಕ್ತ ಕರ್ನಾಟಕ ಧ್ಯೇಯದೊಂದಿಗೆ, ರಾಜ್ಯಾದ್ಯಂತ ಯೋಗ್ಯ ದರದ ಹಾಗೂ ಗುಣಮಟ್ಟದ ಆಹಾರ ಲಭ್ಯವಾಗಿಸುವ ನಿಟ್ಟಿನಲ್ಲಿ, ಇಂದಿರಾ ಕ್ಯಾಂಟೀನಗಳನ್ನು ವಿವಿಧೆಡೆಗಳಲ್ಲಿ ನಿರ್ಮಿಸಲಾಗುತ್ತಿದೆ ಎಂದು ಕೈಗಾರಿಕೆ ಖಾತೆ ಸಚಿವ ಎಂ.ಬಿ ಪಾಟೀಲ್ ಹೇಳಿದರು. ವಿಜಯಪುರದಲ್ಲಿ ನೂತನ ಇಂದಿರಾ ಕ್ಯಾಂಟೀನ ಉದ್ಘಾಟಿಸಿ, ಮಾತನಾಡಿದ ಅವರು, ಕೂಲಿ ಕಾರ್ಮಿಕರು, ಪ್ರವಾಸಿಗರು ಸೇರಿದಂತೆ ಎಲ್ಲ ವರ್ಗದ ಜನರಿಗೆ ಇದರಿಂದ ಸಾಕಷ್ಟು ಅನುಕೂಲವಾಗಲಿದೆ. ಗುಣಮಟ್ಟದ ಆಹಾರ ಸುಲಭವಾಗಿ ಕೈಗೆಟಕುವಂತೆ ಮಾಡುವ ದಿಟ್ಟ ಹೆಜ್ಜೆ ಇದಾಗಿದೆ ಎಂದರು.

<><><>

ಬೆಂಗಳೂರು, ವಿಧಾನಸೌಧದ ಪೂರ್ವ ದಿಕ್ಕಿನಲ್ಲಿರುವ ಕೆಂಪೇಗೌಡರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರ ನಮನ ಸಲ್ಲಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕೆಂಪೇಗೌಡರ ಆಡಳಿತ ವೈಖರಿ, ಪ್ರಶಂಸನೀಯ ಎಂದರು. ನಾಡಪ್ರಭು ಕೆಂಪೇಗೌಡ ಪ್ರಶಸ್ತಿಗೆ ಭಾಜನವಾದ ಐಐಎಸ್ಸಿ, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ, ಮೈಸೂರು ಸೋಪ್ಸ್ ಮತ್ತು ಮಾರ್ಜಕ ಸಮಸ್ಥೆಗಳನ್ನು ಅವರು ಅಭಿನಮದಿಸಿದರು. ಬೆಂಗಳೂರು ಅಭಿವೃದ್ಧಿಯ ಕನಸನ್ನು, ಸರ್ಕಾರ ನನಸು ಮಾಡಲಿದೆ ಎಂದರು. ನಾಡಪ್ರಭು ಕೆಂಪೇಗೌಡರ 516 ನೇ ಜಯಂತ್ಯುತ್ಸವವನ್ನು ನಾಡಿನ ವಿವಿಧೆಡೆಗಳಲ್ಲಿ ಆಚರಿಸಲಾಯಿತು. ಕೆಂಪೇಗೌಡರ ಬದುಕು, ಆಡಳಿತ ವೈಖರಿ, ಜೀವನದ ಸಾಧನೆಗಳ ಬಗ್ಗೆ ವಿದ್ಯಾರ್ಥಿ ಹಾಗೂ ಯುವ ಜನರಿಗೆ ಪರಿಚಯಿಸುವ ಅಗತ್ಯವಿದೆ ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು. ಧಾರವಾಡ ಜಿಲ್ಲಾಡಳಿತ ಹಾಗೂ ಸಮಸ್ಕೃತಿ ಇಲಾಕೆ ವತಿಯಿಂದ ಆಯೋಜಿತ ನಾಡಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ, ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಮಾತನಾಡಿದರು. ಕೆಂಪೇಗೌಡರ ದೂರದೃಷ್ಟಿಯ ಫಲವಾಗಿ ಇಮದು ಬೆಂಗಳೂರು ಎತ್ತರಕ್ಕೆ ಬೆಳೆದು, ಪ್ರಸಿದ್ಧಿ ಪಡೆದಿದೆ ಎಂದರು. .

<><><>

ಪ್ರಜಾಪ್ರಭುತ್ವದ ಸ್ಫೂರ್ತಿ ಬಿಂಬಿಸುವ, ದೀಪಶಿಖಾ ಯಾತ್ರೆ, ಒಂದು ವರ್ಷ ದೇಶಾದ್ಯಂತ ಸಂಚರಿಸಲಿದೆ. 2026ರ ಮಾರ್ಚ 21 ರಂದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಸಮ್ಮುಖದಲ್ಲಿ ಕೊನೆಗೊಳ್ಳಲಿದೆ. ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿಕೆಯಾಗಿದ್ದ ಸಂದರ್ಭದಲ್ಲಿ, ದಮನಕಾರಿ ನೀತಿಯ ವಿರುದ್ಧ ಹೋರಾಡಿದ, ಧಾರವಾಡದ ಸಾಮಾಜಿಕ ಕಾರ್ಯಕರ್ತ, ಪ್ರಸ್ತುತ ಪುಣೆಯಲ್ಲಿ ವಾಸವಾಗಿರುವ ಅಶೋಕ ಜೋಶಿ ಅವರು ತಮ್ಮ ಅನುಭವಗಳನ್ನು ಪ್ರದೇಶ ಸಮಾಚಾರಕ್ಕಾಗಿ ಹಂಚಿಕೊಂಡಿದ್ದಾರೆ.

<><><>

ಧ್ವನಿ: ಅಶೋಕ ಜೋಶಿ 61 ಸೆಕೆಂದುಗಳು

<><><>

ಈಗ ಪ್ರಕಟಣೆ,

ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ. .

<><><>

ಯುವ ಜನತೆಯಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವ ನಿಟ್ಟಿನಲ್ಲಿ, ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್ ಬೋಸರಾಜು ತಿಳಿಸಿದ್ದಾರೆ. ಕೊಡಗು ಜಿಲ್ಲೆ, ಮಡಿಕೇರಿಯ ಕರ್ಣಗೇರಿಯಲ್ಲಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ವತಿಯಿಂದ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಹಾಗೂ ತಾರಾಲಯ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಒಟ್ಟು 12 ಕೋಟಿ 65 ಲಕ್ಷ ರೂಪಾಯಿ ವೆಚ್ಚದಲ್ಲಿ ಕೊಡಗು ಜಿಲ್ಲೆಯಲ್ಲಿ ವಿಜ್ಞಾನ ಖೇಂದ್ರ ನಿರ್ಮಿಸಲಾಗುತ್ತಿದೆ. 'ಸರ್ವರಿಗೂ ವಿಜ್ಞಾನ, ಸುಲಭ ವಿಜ್ಞಾನ, ಸುಸ್ಥಿರ ಅಭಿವೃದ್ಧಿಗಾಗಿ ವಿಜ್ಞಾನ', ಎಂಬ ರಾಜ್ಯ ಸರ್ಕಾರದ ಆಶಯದಂತೆ, ಈ ಕೇಂದ್ರವು ಕಾರ್ಯನಿರ್ವಹಿಸಲಿದೆ ಎಂದರು.

<><><>

2030 ರ ವೇಳೆಗೆ 500 ಗಿಗಾ ವ್ಯಾಟ್ ಹಸಿರು ಇಂಧನ ಉತ್ಪಾದನೆಯ ಗುರಿ ಕೇಂದ್ರ ಸರ್ಕಾರ ಹೊಂದಿದೆ, ಈ ನಿಟ್ಟಿನಲ್ಲಿ ಕನಾಟಕ ಗಮನಾರ್ಹ ಪ್ರಗತಿ ಸಾಧಿಸಿದೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು. ಬೆಂಗಳೂರು ದಕ್ಷಿಣ ಜಿಲ್ಲೆ, ರಾಮನಗರ, ಬಿಡದಿ ಕೈಗಾರಿಕಾ ಪ್ರದೇಶದಲ್ಲಿ ನೂತನವಾಗಿ ನಿಮಾಣಗೊಂಡ, ಲಿನಿಯೇಜ್ ಪವರ್ ಬ್ಯಾಟರಿ ಸ್ಟೋರೇಜ್ ಘಟಕವನ್ನು ಉದ್ಘಾಟಿಸಿ ಮಾತನಾಡಿದರು.

<><><>

ಧಾರವಾಡ, ಕರ್ನಾಟಕ ವಿದ್ಯಾವರ್ಧಕ ಸಂಘದ ಸಭಾಭವನದಲ್ಲಿ, ನಾಲ್ಕು ದಿನಗಳ ಕಾಲ ಆಯೋಜಿತ, ಎಸ್.ಕೆ ಪತ್ತಾರ್ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನವನ್ನು ಸಾಹಿತಿ ಹಾಗೂ ಹಿರಿಯ ಚಿತ್ರಕಲಾವಿದ ಡಾಕ್ಟರ ಲೋಹಿತ ನಾಯ್ಕರ ಉದ್ಘಾಟಿಸಿದರು.

<><><>

ಯುವ ಲೇಖಕರಿಗೆ ಆಯೋಜಿಸಲಾಗಿದ್ದ, ಕವಿ ಚನ್ನವೀರ ಕಣವಿ ಕಾವ್ಯ ಸ್ಪರ್ಧೆ ಹಾಗೂ ಸಾಹಿತಿ ಶಾಂತಾದೇವಿ ಕಣವಿ ಕಥಾ ಸ್ಪರ್ಧೆಯ ಬಹುಮಾನ ಪ್ರದಾನ ಕಾರ್ಯಕ್ರಮ ಇಂದು ಬೆಳಗ್ಗೆ 10.30 ಕ್ಕೆ ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘದ ರ.ಹ ದೇಶಪಾಂಡೆ ಸಭಾಭವನದಲ್ಲಿ ಜರುಗಲಿದೆ.

<><><>

ಶಿವಮೊಗ್ಗ ಜಿಲ್ಲೆ ಗ್ರಾಮೀಣ ಭಾಗದಲ್ಲಿ, ಒಟ್ಟು 22 ಜಾಢಮಾಲಿಗಳನ್ನು ಗುರುತಿಸಲಾಗಿದೆ, ಮುಂಬರುವ 9 ತಿಂಗಳ ಒಳಗಾಗಿ ಅವರಿಗೆ ಪುನರ್ವಸತಿ ಕಲ್ಪಿಸಬೇಕು ಎಂದು, ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಕಾರ್ಯದರ್ಶಿ ಚಂದ್ರಕಲಾ ಅವರು ಅಧಿಕಾರಿಗಳಿಗೆ ನಿರ್ದೇಶಿಸಿದ್ದಾರೆ. ಶಿವಮೊಗ್ಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ, ಸ್ವಚ್ಛತಾ ಕಾರ್ಮಿಕರು ಹಾಗೂ ಪೌರ

ಕಾರ್ಮಿಕರ ಕುರಿತಾದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಒಟ್ಟು 481 ಜನ ಪೌರ ಕಾರ್ಮಿಕರ ಪೈಕಿ 267 ಜನರಿಗೆ ಸೂಕ್ತ ಪುನರ್ವಸತಿ ಕಲ್ಪಿಸಬೇಕಿದೆ, ವಿವಿಧ ಯೋಜನೆಗಳಡಿ 261 ಜನರಿಗೆ ಆವಾಸ ಮಂಜೂರಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

<><><>

ಗೋಲ ಗುಂಬಜ್, ಬಾರಾ ಕಮಾನ್ ಸಹಿತ ವಿವಿಧ ಐತಿಹಾಸಿಕ ಹಾಗೂ ಪಾರಂಪರಿಕ ಕಟ್ಟಡಗಳು, ಸ್ಮಾರಕಗಳು, ಕೋಟೆಗಳನ್ನು ಹೊಂದಿರುವ ವಿಜಯಪುರದಲ್ಲಿ, ಪ್ರವಾಸೋದ್ಯಮವನ್ನು ಉತ್ತೇಜಿಸುವ ನಿಟ್ಟಿನಲ್ಲಿ ಪ್ರವಾಸಿ ಕೇಂದ್ರಗಳನ್ನು ದರ್ಶಿಸುವ ಬಸ್ ಸೇವೆ–ವಿಜಯರಥಕ್ಕೆ, ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ ಪಾಟೀಲ ಚಾಲನೆ ನೀಡಿದ್ದಾರೆ. ಇದೇ ಸಂದರ್ಭದಲ್ಲಿ ಸಚಿವರು, ವಿಜಯಪುರ ನಗರದ, 140 ವರ್ಷಗಳಷ್ಟು ಹಳೆಯದಾದ, ನಗರ ಕೇಂದ್ರ ಗ್ರಂಥಾಲಯದ, ನವೀಕೃತ ಕಟ್ಟಡವನ್ನು ಉದ್ಘಾಟಿಸಿದರು. ವಿಜಯಪುರ ಜಿಲ್ಲೆ ತಿಕೋಟಾದ ಸರ್ಕಾರಿ ಶಾಲೆ ಆವರಣದಲ್ಲಿ ವೀರಯೋಧ, ಹುತಾತ್ಮ ರಾಜು ಗಿರಿಮಲ್ಲ ಕರ್ಜಗಿ ಅವರ ಪುತ್ಥಳಿಯನ್ನು ಸಚಿವ ಎಂ. ಬಿ ಪಾಟೀಲ್ ಅನಾವರಣಗೊಳಿಸಿದರು.

<><><>

ಆಕಾಶವಾಣಿಯ ಜನಪ್ರಿಯ, ಮನ್ ಕಿ ಬಾತ್ ಕಾರ್ಯಕ್ರಮದ ಮೂಲಕ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ 11 ಗಂಟೆಗೆ, ದೇಶ ವಿದೇಶಗಳಲ್ಲಿರುವ ಭಾರತೀಯರೊಂದಿಗೆ, ತಮ್ಮ ಅನಿಸಿಕೆ ಹಂಚಿಕೊಳ್ಳಲಿದ್ದಾರೆ. ಇದು ಮನದ ಮಾತು ಸರಣಿಯ 123 ನೇ ಸಂಚಿಕೆಯಾಗಿದೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಭೆ; ಇಲಾಖೆ ದಕ್ಷತೆ ಹೆಚ್ಚಳಕ್ಕೆ ನಿರ್ದೇಶನ.

ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ; ಕೆಂಪೇಗೌಡರ ಕೊಡುಗೆಗಳನ್ನು ಸ್ಮರಿಸಿದ ಗಣ್ಯರು.

ರಾಜ್ಯದ ಎಲ್ಲ ಜಿಲ್ಲೆಗಳಲ್ಲೂ ವಿಜ್ಞಾನ ಕೇಂದ್ರ ಸ್ಥಾಪನೆಗೆ ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವಾಲಯ ಯೋಜನೆ.

20230 ರ ವೇಳೆಗೆ, 500 ಗಿಗಾ ವ್ಯಾಟ್ ಹಸಿರು ಇಂಧನ ಉತ್ಪಾದಿಸಲು ಕೇಂದ್ರದ ಸಿದ್ಧತೆ

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

<><><>